<u>**ಕರ್ನಾಟಕ ವಿಧಾನ ಪರಿಷತ್ತು**</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 449(520)
ಸದಸ್ಯರ ಹೆಸರು : ಶ್ರೀ ಕಿಶೋರ್ ಕುಮಾರ್ ಪುತ್ತೂರ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 30.01.2026.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಗ್ರಾಮೀಣ ಸ್ಥಳೀಯ ಸಂಸ್ಥೆಗಳು (ಗ್ರಾಮ ಪಂಚಾಯತ್ ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್) ಮತ್ತು ನಗರ ಸ್ಥಳೀಯ ಸಂಸ್ಥೆಗಳು (ಪಟ್ಟಣ ಪಂಚಾಯತ್, ಪುರಸಭೆ, ನಗರಸಭೆ) ವಿವಿಧ ಸಾರ್ವಜನಿಕ ಉದ್ದೇಶಕ್ಕೆ ಜಮೀನು ಮಂಜೂರಾತಿ ಕೋರಿ ಸಲ್ಲಿಸಿದ ಪ್ರಸ್ತಾವನೆಗಳ ಪೈಕಿ ಜಮೀನು ಮಂಜೂರಾತಿಗೊಳಿಸಲು ಬಾಕಿ ಇರುವ ಮತ್ತು ತಿರಸ್ಕೃತಗೊಂಡ ಪ್ರಸ್ತಾವನೆಗಳು ಯಾವುವು; ಪ್ರಸ್ತಾವನೆ ನೀಡಿದ ದಿನಾಂಕ ಸಹಿತ ವಿವರ ನೀಡುವುದು; | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಗ್ರಾಮೀಣ ಸ್ಥಳೀಯ ಸಂಸ್ಥೆಗಳು (ಗ್ರಾ.ಪಂ., ತಾ.ಪಂ., ಜಿ.ಪಂ.) ಮತ್ತು ನಗರ ಸ್ಥಳೀಯ ಸಂಸ್ಥೆಗಳು (ಪಟ್ಟಣ ಪಂಚಾಯತ್, ಪುರಸಭೆ, ನಗರಸಭೆ) ವಿವಿಧ ಸಾರ್ವಜನಿಕ ಉದ್ದೇಶಕ್ಕೆ ಜಮೀನು ಮಂಜೂರಾತಿ ಕೋರಿ ಸಲ್ಲಿಸಿದ ಪ್ರಸ್ತಾವನೆಗಳ ಪೈಕಿ ಜಮೀನು ಮಂಜೂರಾತಿಗೊಳಿಸಲು ಬಾಕಿ ಇರುವ ಮತ್ತು ತಿರಸ್ಕೃತ ಪ್ರಸ್ತಾವನೆಗಳ ವಿವರವನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| (ಆ) | ಸದರಿ ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ಮಂಜೂರಾದ ಜಮೀನನ್ನು ರದ್ದುಪಡಿಸಲಾದ ಪ್ರಕರಣಗಳು ಇವೆಯೇ; (ವಿವರ ನೀಡುವುದು); | ಉಡುಪಿ ಜಿಲ್ಲೆಯಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ಮಂಜೂರಾದ ಜಮೀನನ್ನು ರದ್ದುಪಡಿಸಲಾದ ಪ್ರಕರಣಗಳು ಇರುವುದಿಲ್ಲ.<br>ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನಲ್ಲಿ 2 ಪ್ರಕರಣಗಳಲ್ಲಿ ನಿವೇಶನಕ್ಕಾಗಿ ಕಾಯ್ದಿರಿಸಲಾದ ಜಮೀನು ನಿವೇಶನಕ್ಕೆ ಯೋಗ್ಯವಲ್ಲವೆಂಬ ಕಾರಣಕ್ಕೆ ರದ್ದತಿಗೆ ಬಾಕಿ ಇರುತ್ತದೆ. **(ಅನುಬಂಧ-1)** |
| (ಇ) | ಗ್ರಾಮೀಣ ಸ್ಥಳೀಯ ಸಂಸ್ಥೆ ಮತ್ತು ನಗರ ಸ್ಥಳೀಯ ಸಂಸ್ಥೆಗಳು ವಿವಿಧ ಸಾರ್ವಜನಿಕ ಉದ್ದೇಶಕ್ಕೆ ಭೂ ಮಂಜೂರಾತಿ ಕೋರಿ ಸಲ್ಲಿಸುವ ಪ್ರಸ್ತಾವನೆಗಳನ್ನು ಯಾವ ಕಾಲಮಿತಿಯೊಳಗೆ ಭೂ ಮಂಜೂರಾತಿಗೊಳಿಸಲು ಕ್ರಮ ವಹಿಸಲಾಗುತ್ತಿದೆ; | ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳು ವಿವಿಧ ಸಾರ್ವಜನಿಕ ಉದ್ದೇಶಕ್ಕೆ ಸರ್ಕಾರಿ ಜಮೀನಿನ ಮಂಜೂರಾತಿಗಾಗಿ ಕೋರಿಕೆ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಆದ್ಯತೆಯ ಮೇರೆಗೆ ಕಾಯ್ದಿರಿಸಲು/ಮಂಜೂರಾತಿ ಮಾಡಲು ಕ್ರಮವಹಿಸಲಾಗುತ್ತಿದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
| --- | --- | --- |
| (ಈ) | ವಿವಿಧ ಸರ್ಕಾರ ಕಚೇರಿಗಳಿಂದ ಭೂ ಮಂಜೂರಾತಿ ಕೋರಿ ಸಲ್ಲಿಸುವ ಪ್ರಸ್ತಾವನೆಗಳನ್ನು ಈಡೇರಿಸಲು ಸದರಿ ಅರ್ಜಿಗಳ ಸೂಕ್ತ ವಿಲೇವಾರಿಗೆ ಮೇಲುಸ್ತುವಾರಿ ಪ್ರಾಧಿಕಾರ ಯಾವುದು; | ಕಂದಾಯ ಇಲಾಖೆಯು ಸರ್ಕಾರಿ ಜಮೀನಿನ ಮಂಜೂರಾತಿ/ಕಾಯ್ದಿರಿಸುವ ಪ್ರಾಧಿಕಾರವಾಗಿರುತ್ತದೆ. |
| (ಉ) | ಸದರಿ ಜಿಲ್ಲೆಗಳಲ್ಲಿ ಸಾರ್ವಜನಿಕ ಉದ್ದೇಶಕ್ಕೆ ಲಭ್ಯವಿರುವ ಸರ್ಕಾರಿ ಜಮೀನುಗಳು ಎಷ್ಟು; (ಸರ್ವೇ ನಂಬರ್ ಸಹಿತ ವಿಸ್ತೀರ್ಣದ ವಿವರ ನೀಡುವುದು); | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾರ್ವಜನಿಕ ಉದ್ದೇಶಕ್ಕೆ ಒಟ್ಟು 1612.17 ಎಕರೆ ಹಾಗೂ ಉಡುಪಿ ಜಿಲ್ಲೆಯಲ್ಲಿ ಒಟ್ಟು 166.27 ಎಕರೆ ಸರ್ಕಾರಿ ಜಮೀನು ಲಭ್ಯವಿರುತ್ತದೆ. ಸರ್ವೆ ನಂಬರ್ ವಾರು ವಿವರವನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |

(ಕಡತ ಸಂಖ್ಯೆ: ಆರ್‌ಡಿ 17 ಎಲ್‌ಜಿಎ 2026)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು